**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 53/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ07**

**ದಿನಾಂಕಃ** 23.10.2025 **ಸಿಡಬ್ಲ್ಯೂ11**

| | |
|---|---|
| ಹೆಸರು | ರಾಘವೇಂದ್ರ |
| ತಂದೆ ಹೆಸರು | ಚಂದ್ರಪ್ಪ |
| ವಯಸ್ಸು | 28 ವರ್ಷ |
| ಉದ್ಯೋಗ | ಚಾಲಕ |
| ವಾಸ ಸ್ಥಳ | ಹರಿಹರ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.12 ರವರ ಪರಿಚಯ ಇದೆ. ಸಾಕ್ಷಿಗೆ ಒಂದು ದಾಖಲೆ ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇದೆ ಎಂದು ಗುರುತಿಸಿರುತ್ತಾರೆ, ಸದರಿ ದಾಖಲೆ ವಾಹನ ಅಮಾನತ್ತು ಪಂಚನಾಮೆ ಆಗಿದ್ದು ಅದನ್ನು ನಿಪಿ.11 ಎಂದು ಸಾಕ್ಷಿಯ ಸಹಿಯನ್ನು ನಿಪಿ.11(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು ಒಂದುವರೆ ಎರಡು ವರ್ಷದ ಹಿಂದೆ ಗುತ್ತೂರು ಗ್ರಾಮಾಂತರ ಠಾಣೆಯಲ್ಲಿ ಬೈಕ್ ಬಿಡುಗಡೆ ಕಾಲಕ್ಕೆ ಮಾಡಿರುತ್ತೇನೆ. ನನ್ನೊಂದಿಗೆ ಯಾರೂ ಇರಲಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ22..09.2021 ರಂದು ಪೋಲೀಸರು ನನ್ನ ಸಮಕ್ಷಮ ಪಂಚನಾಮೆ ಜರುಗಿಸಿ ಬಿಡುಗಡೆ ಮಾಡಿದ ಬೈಕನ ನಂಬರ್ ಕೆಎ-17 ಹೆಚ್ ಕೆ-9317 ಎಂದರೆ ಸಾಕ್ಷಿಯು ಬೈಕ್ ನಂ. ನೆನಪಿಲ್ಲ ಎಂದು ನುಡಿಯುತ್ತಾರೆ. ಪಂಚನಾಮೆಯನ್ನು ಬೆಳಗ್ಗೆ 10 ರಿಂದ 10.30 ವರೆಗೆ ಜರುಗಿಸಿರುತ್ತಾರೆ ಎಂದರೆ ನೆನಪಿಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ವೈ ಹೆಚ್ ಡಿ ವಕೀಲರಿಂದಃ**

ಪೋಲೀಸರು ನನಗೆ ಯಾವುದೇ ನೋಟೀಸ್ ನೀಡಿಲ್ಲ ಎಂದರೆ ಸರಿ. ನಿಪಿ.11 ರಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿ.

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ